ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/16/ವಿವಿಧ ಸುತ್ತೋಲೆ/2011-12

ದಿನಾಂಕ:07.08.2017

ಇವರಿಗೆ:
ಪ್ರಾದೇಶಿಕ ಜಂಟಿ ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ,
ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ,
ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ.

**ತುರ್ತು**

ವಿಷಯ: **ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತು ಮಾಹಿತಿ ಒದಗಿಸುವ** ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ/45/ವಿವಿಧ/2017, ದಿನಾಂಕ:14.07.2017.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾದಕ ವಸ್ತುಗಳ ಸೇವನೆಯಿಂದಾಗುತ್ತಿರುವ ದುಷ್ಪರಿಣಾಮಗಳು ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತಂತೆ ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:18-03-2017 ರಂದು ನಡೆದ ಸಭೆಯ ನಡವಳಿಯಲ್ಲಿನ ನಿರ್ದೇಶನ/ಸೂಚನೆಗಳನ್ವಯ ಇಲಾಖಾ ವ್ಯಾಪ್ತಿಯ ಕಾಲೇಜುಗಳಲ್ಲಿ ತುರ್ತಾಗಿ ಸೂಕ್ತ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ನಿಗದಿತ ನಮೂನೆಯಲ್ಲಿನ ಸೂಕ್ತ ಮಾಹಿತಿಯನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಈ ಸಂಬಂಧ, ಮಾದಕ ವಸ್ತುಗಳ ಸೇವನೆಯಿಂದಾಗುತ್ತಿರುವ ದುಷ್ಪರಿಣಾಮಗಳು ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತಂತೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಇಲಾಖಾ ವ್ಯಾಪ್ತಿಯ ಪದವಿ ಕಾಲೇಜುಗಳಿಗೆ ಈಗಾಗಲೇ ಹಲವಾರು ಸುತ್ತೋಲೆಗಳ ಮೂಲಕ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ. ಅದರಂತೆ ಸದರಿ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಮತ್ತೊಮ್ಮೆ ಸೂಚನೆಯನ್ನು ನೀಡುತ್ತಾ, ತಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದೇಶಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದಲ್ಲಿ ಅಂತಹವರ ಮಾಹಿತಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ ಕ್ರೋಢೀಕೃತ ಮಾಹಿತಿಯನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಲಾಗಿದೆ.

8/8/17

ಕಾಲೇಜು ಶಿಕ್ಷಣ ಆಯುಕ್ತರು

ಪ್ರತಿಯನ್ನು:

1) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಕೋರಿದ ಮಾಹಿತಿಯನ್ನು *ಕೂಡಲೇ ಸಂಬಂಧಪಟ್ಟ ಜಂಟಿ ನಿರ್ದೇಶಕರಿಗೆ ಸಲ್ಲಿಸುವಂತೆ* ಸೂಚಿಸಲಾಗಿದೆ.
2) ಕಚೇರಿ ಪ್ರತಿ.

# Education Department Format

| Sl. No. | Name of the Institute | Name of the Foreign Student with Photograph & Present Address, Contact Phone Number | Course Admitted and Date of Admission | Passport Number and Visa Number with Validity | Remarks |
|---|---|---|---|---|---|
| 1 | 2 | 3 | 4 | 5 | 6 |
| | | | | | |

Regional Joint Director
___________ Division